# Bangalore
# Regional News
# 20.03.2025 / 2.30 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ವಿದ್ಯುತ್ ಬೆಲೆ ಪ್ರತಿ ಯುನಿಟ್‌ಗೆ 36 ಪೈಸೆ ಹೆಚ್ಚಳಮಾಡಿ ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ ಆದೇಶ
2. ನಾಳೆಯಿಂದ ರಾಜ್ಯಾದ್ಯಂತ ಎಸ್‌ಎಸ್‌ಎಲ್‌ಸಿ ಪರೀಕ್ಷೆ : ಜಿಲ್ಲಾ ಕೇಂದ್ರಗಳಲ್ಲಿ ವೆಬ್‌ಕಾಸ್ಟಿಂಗ್ ವ್ಯವಸ್ಥೆ
3. ಬೆಂಗಳೂರಿನಲ್ಲಿ ನೀರಿನ ಸಂರಕ್ಷಣೆಗೆ ವಿಶೇಷ ಅಭಿಯಾನ : ನಾಳೆ ಸ್ಯಾಂಕಿ ಕೆರೆಗೆ ಕಾವೇರಿ ಆರತಿ
4. ಬೆಂಗಳೂರು ಉಪನಗರ ರೈಲು ಯೋಜನೆಗೆ ಭೂಮಿ ಹಸ್ತಾಂತರಿಸಲು ರಾಜ್ಯ ಸರ್ಕಾರ ವಿಳಂಬ : ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಆರೋಪ
5. ರಾಜ್ಯದಲ್ಲಿ ಮುಂದುವರಿದ ಒಣಹವೆ ; ಕೆಲವೆಡೆ ಮಳೆಯಾಗುವ ಸಾಧ್ಯತೆ – ಹವಾಮಾನ ಇಲಾಖೆ

******************

ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ ವಿದ್ಯುತ್ ಬೆಲೆಯನ್ನು ಪ್ರತಿ ಯುನಿಟ್‌ಗೆ 36 ಪೈಸೆ ಹೆಚ್ಚಳ ಮಾಡಿ, ಇಂದು ಆದೇಶ ಹೊರಡಿಸಿದೆ. ಏಪ್ರಿಲ್ 1 ರಿಂದಲೇ ಹೊಸ ಆದೇಶ ಜಾರಿಯಾಗಲಿದೆ. ಮುಂದಿನ ಮೂರು ಆರ್ಥಿಕ ವರ್ಷಗಳಿಗೆ ಅನ್ವಯವಾಗುವಂತೆ ಈ ಆದೇಶ ಹೊರಡಿಸಲಾಗಿದೆ.

ರಾಜ್ಯದಲ್ಲಿ ವಿದ್ಯುತ್ ದರ ಏರಿಕೆಯನ್ನು ಬಿಜೆಪಿ ಖಂಡಿಸಿದೆ. ಉಚಿತ ವಿದ್ಯುತ್ ನೀಡುವುದಾಗಿ ಹೇಳಿ ಮತ್ತೊಂದೆಡೆ ದರ ಹೆಚ್ಚಿಸಿ ಗ್ರಾಹಕರ ಮೇಲೆ ಹೊರೆ ಹೊರಿಸಲಾಗುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ.

******************

ರಾಜ್ಯದಲ್ಲಿ ನಾಳೆಯಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ ನಡೆಯಲಿದ್ದು, ಏಪ್ರಿಲ್ 4ಕ್ಕೆ ಅಂತ್ಯಗೊಳ್ಳಲಿದೆ. ನಾಳೆ ಪ್ರಥಮ ಭಾಷೆ ಕನ್ನಡ, ಸಂಸ್ಕೃತ, ಹಿಂದಿ ಮತ್ತು ಉರ್ದು ಪರೀಕ್ಷೆ ನಡೆಯಲಿದೆ. ಬೆಳಗ್ಗೆ 10 ರಿಂದ ಮಧ್ಯಾಹ್ನ 1.15ರವರೆಗೆ ಪರೀಕ್ಷೆ ನಡೆಯಲಿದೆ.

ಈ ಬಾರಿ ಒಟ್ಟು 8 ಲಕ್ಷದ 96 ಸಾವಿರದ 447 ವಿದ್ಯಾರ್ಥಿಗಳು ನೋಂದಣಿ ಮಾಡಿಕೊಂಡಿದ್ದಾರೆ. 3 ಲಕ್ಷದ 35 ಸಾವಿರದ 468 ಬಾಲಕರು 3 ಲಕ್ಷದ 78 ಸಾವಿರದ 389 ಬಾಲಕಿಯರು ಮತ್ತು 5 ತೃತೀಯ ಲಿಂಗಿಗಳಿದ್ದಾರೆ. ಒಟ್ಟು 2 ಸಾವಿರದ 818 ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ.

ಈ ಬಾರಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಬಿಗಿ ಭದ್ರತಾ ವ್ಯವಸ್ಥೆ ಮಾಡಲಾಗಿದೆ. ವೆಬ್‌ಕಾಸ್ಟಿಂಗ್ ವ್ಯವಸ್ಥೆಯೂ ಇರಲಿದ್ದು, ಜಿಲ್ಲಾಧಿಕಾರಿಗಳು ವೀಕ್ಷಣೆ ಮಾಡಲಿದ್ದಾರೆ. ಪರೀಕ್ಷಾ ಸಮಯದಲ್ಲಿ ಕೇಂದ್ರಗಳ ಸುತ್ತ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶ ಎಂದು ಪರಿಗಣಿಸಿ, ಜೆರಾಕ್ಸ್, ಸೈಬರ್, ಕಂಪ್ಯೂಟರ್ ಕೇಂದ್ರಗಳನ್ನು ಮುಚ್ಚುವಂತೆ ಆದೇಶ ನೀಡಲಾಗಿದೆ.

******************

ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಎಲ್ಲಾ ಜಿಲ್ಲೆಗಳಲ್ಲೂ ಸಕಲ ಸಿದ್ಧತೆ ಕೈಗೊಳ್ಳಲಾಗಿದೆ. ಬಳ್ಳಾರಿ ಜಿಲ್ಲೆಯ 64 ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದ್ದು, ಪರೀಕ್ಷಾ ಕೇಂದ್ರಗಳ ಸುತ್ತ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ.

ವಿಜಯನಗರ ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ಊಹಾಪೋಹಗಳಿಗೆ ಕಿವಿಗೊಡದೆ, ವಿಶ್ವಾಸದಿಂದ ಪರೀಕ್ಷೆಗಳನ್ನು ಬರೆದು ಉತ್ತಮ ಫಲಿತಾಂಶ ಪಡೆಯಬೇಕೆಂದು ಜಿಲ್ಲಾಧಿಕಾರಿ ಎಂ.ಎಸ್. ದಿವಾಕರ್ ಕರೆ ನೀಡಿದ್ದಾರೆ.

ದಾವಣಗೆರೆ ಜಿಲ್ಲೆಯ 81 ಕೇಂದ್ರಗಳಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾ ಶಿಕ್ಷಣಾಧಿಕಾರಿ ಜಿ.ಕೊಟ್ರೇಶ್ ತಿಳಿಸಿದ್ದಾರೆ.

ನಾಳೆಯಿಂದ ನಡೆಯುವ ಎಸ್.ಎಸ್.ಎಲ್.ಸಿ ಪರೀಕ್ಷೆಗಳನ್ನು ಸುಸೂತ್ರವಾಗಿ ನಡೆಸಲು ಉತ್ತರ ಕನ್ನಡ ಜಿಲ್ಲೆಯಲ್ಲಿ ಎಲ್ಲಾ ರೀತಿಯ ಸಕಲ ಸಿದ್ಧತೆ ಕೈಗೊಳ್ಳಲಾಗಿದೆ ಎಂದು ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿ ಪ್ರಿಯ ಸ್ಪಷ್ಟಪಡಿಸಿದ್ದಾರೆ.

ಯಾದಗಿರಿ ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಈ ಬಾರಿ ಬಿಗಿ ಭದ್ರತೆ ಕೈಗೊಳ್ಳಲಾಗಿದೆ.

ಈ ಬಾರಿ ಬೆಳಗಾವಿ ಜಿಲ್ಲೆಯ 97 ಕೇಂದ್ರಗಳಲ್ಲಿ 34 ಸಾವಿರದ 863 ಹಾಗೂ ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯ 130 ಕೇಂದ್ರಗಳಲ್ಲಿ 47 ಸಾವಿರದ 511 ಒಟ್ಟು 82 ಸಾವಿರದ 374 ವಿದ್ಯಾರ್ಥಿಗಳು ಪರೀಕ್ಷೆ ಬರೆಯುತ್ತಿದ್ದಾರೆ ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ತಿಳಿಸಿದ್ದಾರೆ.

ಮೈಸೂರಿನಲ್ಲಿ ಈ ಬಾರಿ ಒಟ್ಟು 39 ಸಾವಿರದ 103 ವಿದ್ಯಾರ್ಥಿಗಳ ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷಾ ಕೇಂದ್ರಗಳಲ್ಲಿ ಸಿಸಿ ಟಿವಿ ಕಣ್ಗಾವಲಿದ್ದು, ವೆಬ್‌ಕಾಸ್ಟಿಂಗ್ ನಡೆಸಲಾಗುವುದು ಎಂದು ಜಿಲ್ಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಎಸ್.ಟಿ. ಜವರೇಗೌಡ ಮಾಹಿತಿ ನೀಡಿದ್ದಾರೆ.

ಧ್ವನಿ : ಎಸ್.ಟಿ. ಜವರೇಗೌಡ (30 ಸೆಕೆಂಡ್‌ಗಳು)

*****************

ಕನ್ನಡಪರ ವಿವಿಧ ಸಂಘಟನೆಗಳು ಶನಿವಾರ ಕರೆ ನೀಡಿರುವ ಕರ್ನಾಟಕ ಬಂದ್ ವಿಚಾರ ವಿಧಾನಪರಿಷತ್‌ನಲ್ಲಿ ಇಂದು ಪ್ರತಿಧ್ವನಿಸಿದೆ.

ಬಂದ್ ಕರೆ ಹಿನ್ನೆಲೆಯಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಅಧಿಕಾರಿಗಳೊಂದಿಗೆ ಸಭೆ ನಡೆಸಿ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿಧಾನ ಪರಿಷತ್ತಿಗೆ ತಿಳಿಸಿದ್ದಾರೆ.

ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಶೂನ್ಯವೇಳೆಯಲ್ಲಿ ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಏಕಾಏಕಿ ಬಂದ್ ಕರೆಯುವ ಅಗತ್ಯವಿರಲಿಲ್ಲ ಎಂದು ಹೇಳಿದ್ದಾರೆ.

ಇದಕ್ಕೂ ಮುನ್ನ ಮಾತನಾಡಿದ ಸದಸ್ಯ ನಾರಾಯಣಸ್ವಾಮಿ ನಾಳೆಯಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಆರಂಭವಾಗಲಿದೆ. ಶನಿವಾರ ಬಂದ್ ಕರೆ ನೀಡಲಾಗಿದೆ. ಇದರಿಂದ ವಿದ್ಯಾರ್ಥಿಗಳು ಆತಂಕಕ್ಕೆ ಒಳಗಾಗಿದ್ದು, ಇಂತಹ ಗೊಂದಲದ ಪರಿಸ್ಥಿತಿ ನಿವಾರಣೆ ಮಾಡಲು ಸರ್ಕಾರ ಏನು ಕ್ರಮ ಕೈಗೊಂಡಿದೆ ಎಂದು ಪ್ರಶ್ನಿಸಿದರು.

*****************

ಬೇಸಿಗೆ ಸಮಯದಲ್ಲಿ ನೀರಿನ ಸಂರಕ್ಷಣೆ ಅಭಿಯಾನದ ಜೊತೆಗೆ ಸ್ಯಾಂಕಿ ಕೆರೆಯಲ್ಲಿ ನಾಳೆ ಕಾವೇರಿ ಆರತಿ ಮಾಡಲು ಸರ್ಕಾರ ತೀರ್ಮಾನಿಸಿದೆ. ಇದು ಸರ್ಕಾರದ ಕಾರ್ಯಕ್ರಮವೇ ಹೊರತು ರಾಜಕೀಯ ಕಾರ್ಯಕ್ರಮವಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾವೇರಿ 5ನೇ ಹಂತದ ಕುಡಿಯುವ ನೀರಿನ ಯೋಜನೆ ಜಾರಿ ಮಾಡಲಾಗಿದ್ದು, 6ನೇ ಹಂತದ ಯೋಜನೆಗೆ ಡಿಪಿಆರ್ ಸಿದ್ಧಪಡಿಸಲಾಗಿದೆ. ನೀರಿನ ಸದ್ಬಳಕೆ ಹಾಗೂ ಸಂರಕ್ಷಣೆಗೆ ಜನರಲ್ಲಿ ಜಾಗೃತಿ ಮೂಡಿಸಲು ಒಂದು ತಿಂಗಳ ಕಾಲ ಅಭಿಯಾನ ಹಮಿಕೊಳ್ಳಲಾಗಿದೆ' ಎಂದು ಹೇಳಿದ್ದಾರೆ.

ಸಾರ್ವಜನಿಕರು ಈ ಅಭಿಯಾನದಲ್ಲಿ ಭಾಗವಹಿಸಿ, ನೀರಿನ ಉಳಿತಾಯ ಮಾಡಬೇಕು' ಎಂದು ಕರೆ ನೀಡಿದ್ದಾರೆ.

*****************

ಬೆಂಗಳೂರು ಉಪನಗರ ರೈಲು ಯೋಜನೆಗೆ ಭೂಮಿ ಹಸ್ತಾಂತರಿಸಲು ರಾಜ್ಯ ಸರ್ಕಾರ ವಿಳಂಬ ನೀತಿ ಅನುಸರಿಸುತ್ತಿದೆ ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಲೋಕಸಭೆಯಲ್ಲಿ ಲಿಖಿತ ಉತ್ತರದ ಮೂಲಕ ಮಾಹಿತಿ ನೀಡಿದ್ದಾರೆ.

ಬೆಂಗಳೂರು ದಕ್ಷಿಣ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ ನಿನ್ನೆ ಸದನದಲ್ಲಿ ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ರೈಲ್ವೆ ತಂತ್ರಜ್ಞಾನದಲ್ಲಿ ಪರಿಣತಿ ಹೊಂದಿರುವ ನಿರ್ದೇಶಕರ ಅಗತ್ಯವಿದ್ದು, ಸರ್ಕಾರ ಅರೆಕಾಲಿಕ ನಿರ್ದೇಶಕರನ್ನು ನೇಮಕ ಮಾಡಿದೆ ಎಂದು ತಿಳಿಸಿದ್ದಾರೆ.

ಕಾಂಗ್ರೆಸ್ ಸರ್ಕಾರ ಸುರಂಗ ರಸ್ತೆಗಳು ಮತ್ತು ಹೆಚ್ಚುವರಿ ಮೇಲ್ಸೇತುವೆಗಳಂತಹ ತರ್ಕಹೀನ ಯೋಜನೆಗಳಿಗೆ ತೆರಿಗೆದಾರರ ಹಣವನ್ನು ದುರುಪಯೋಗ ಪಡಿಸಿಕೊಳ್ಳುತ್ತಿದ್ದು, ಇದು ಬೆಂಗಳೂರಿನ ಸಂಚಾರ ವ್ಯವಸ್ಥೆಯನ್ನು ಪರಿಹರಿಸುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

*****************

ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ರ ಪರಿಷ್ಕೃತ ಅಂದಾಜು ಮೊತ್ತಸುಮಾರು 87 ಸಾವಿರದ 818 ಕೋಟಿ ರೂಪಾಯಿಯಾಗಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿಧಾನಪರಿಷತ್‌ನಲ್ಲಿ ತಿಳಿಸಿದ್ದಾರೆ.

ಬಿಜೆಪಿ ಸದಸ್ಯ ವಿ.ಎಚ್. ಪೂಜಾರ್ ಪ್ರಶ್ನೆಗೆ ಉತ್ತರಿಸಿದ ಡಿ.ಕೆ. ಶಿವಕುಮಾರ್, ಭೂಸ್ವಾಧೀನ, ಪುನರ್‌ವಸತಿ ಮತ್ತು ಪುನರ್ ನಿರ್ಮಾಣಕ್ಕಾಗಿ 2024-25ನೇ ಸಾಲಿನ ಆಯವ್ಯಯದಲ್ಲಿ 1200 ಕೋಟಿ ರೂಪಾಯಿ, ಪ್ರಸಕ್ತ ಸಾಲಿನ ಆಯವ್ಯಯದಲ್ಲಿ 1700 ಕೋಟಿ ರೂಪಾಯಿ ಅನುದಾನ ಹಂಚಿಕೆ ಮಾಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಕನ್ನಡ ಚಲನ ಚಿತ್ರ ನೀತಿ-2011 ಜಾರಿಗೆ ಬಂದಾಗಿನಿಂದ 2018ರವರೆಗೆ ಒಟ್ಟು 804 ಚಲನಚಿತ್ರಗಳಿಗೆ ಸಹಾಯಧನ ನೀಡಲಾಗಿದೆ. 2023 ಮತ್ತು 2024ನೇ ಸಾಲಿಗೆ ಆಯ್ಕೆ ಸಲಹಾ ಸಮಿತಿಯನ್ನು ರಚಿಸಿ ಸಹಾಯದಧನಕ್ಕೆ ಅರ್ಜಿ ಆಹ್ವಾನಿಸುವುದು ಬಾಕಿ ಇದೆ ಎಂದು ಸಭಾನಾಯಕ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಬೋಸರಾಜ್ ವಿಧಾನ ಪರಿಷತ್ತಿಗೆ ತಿಳಿಸಿದ್ದಾರೆ.

ಪ್ರಶ್ನೋತ್ತರ ವೇಳೆಯಲ್ಲಿ ನಾಮ ನಿರ್ದೇಶಿತ ಸದಸ್ಯರಾದ ಡಾ.ಉಮಾಶ್ರೀ ಅವರ ಪ್ರಶ್ನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪರವಾಗಿ ಉತ್ತರಿಸಿದ ಸಚಿವರು, 2022ನೇ ವರ್ಷದಿಂದ ಜಾರಿಗೆ ಬರುವಂತೆ 200 ಚಲನ ಚಿತ್ರಗಳಿಗೆ ಸಹಾಯಧನ ವಿತರಿಸಲಾಗುತ್ತಿದೆ. ಸಹಾಯಧನ ಪಡೆಯಲು ಕಡ್ಡಾಯವಾಗಿ ಸಲ್ಲಿಸಬೇಕಾದ ಆದಾಯ ತೆರಿಗೆ ಇಲಾಖೆ, ಎನ್‌ಓಸಿ ಹಾಗೂ ಇತರೆ ದಾಖಲಾತಿಗಳನ್ನು ಸಲ್ಲಿಸದ ಕಾರಣ 21 ಚಲನ ಚಿತ್ರಗಳಿಗೆ ಸಹಾಯಧನ ವಿತರಣೆ ಬಾಕಿ ಇದೆ ಎಂದರು.

*****************

ವಿಧಾನಸಭೆಯಲ್ಲಿಂದು ಕರಾವಳಿ ಭಾಗದ ಮೀನುಗಾರಿಕೆ ಸಮಸ್ಯೆ ಕುರಿತಂತೆ ಸದಸ್ಯ ವೇದವ್ಯಾಸ್ ಕಾಮತ್ ಸದನದ ಗಮನ ಸೆಳೆದರು. ರಾಜ್ಯ ಸರ್ಕಾರ ಸೀಮೆಎಣ್ಣೆ ಸಬ್ಸಿಡಿ ನೀಡುವ ಮೂಲಕ ಸಮಸ್ಯೆಯನ್ನು ಬಗೆಹರಿಸುವಂತೆ ತಿಳಿಸಿದರು.

ಈ ನಡುವೆ ರಾಜ್ಯದಲ್ಲಿ ಹಾಸ್ಟೆಲ್‌ಗಳ ನಿರ್ಮಾಣ ಕುರಿತು ಆಡಳಿತ ರೂಢ ಸದಸ್ಯರು ಹಾಗೂ ಪ್ರತಿಪಕ್ಷ ಸದಸ್ಯರ ನಡುವೆ ಕೆಲಕಾಲ ಮಾತಿನ ಚಕಮಕಿ ನಡೆಯಿತು.

ಹಿಂದಿನ ಸರ್ಕಾರ ವಿದ್ಯಾರ್ಥಿಗಳಿಗೆ ಹಾಸ್ಟೆಲ್‌ಗಳ ಸಂಖ್ಯೆಯನ್ನು ಹೆಚ್ಚಳ ಮಾಡಿಲ್ಲ ಎಂದು ಕಾಂಗ್ರೆಸ್ ಸದಸ್ಯ ನರೇಂದ್ರ ಸ್ವಾಮಿ ಆರೋಪಿಸಿದರು. ಈ ವೇಳೆ ಮಧ್ಯಪ್ರವೇಶಿಸಿದ ಬಿಜೆಪಿ ಸದಸ್ಯ ಡಾ. ಸಿ. ಅಶ್ವತ್ಥ ನಾರಾಯಣ ಹಾಸ್ಟೆಲ್‌ಗಳ ಸಂಖ್ಯೆ ಕಡಿಮೆ ಮಾಡಿಲ್ಲ ಎಂದು ಹೇಳಿದರು. ಇದಕ್ಕೆ ವಿಪಕ್ಷ ನಾಯಕ ಅರವಿಂದ್ ಬೆಲ್ಲದ್ ಹಾಗೂ ಬಸನಗೌಡ ಪಾಟೀಲ್ ಯತ್ನಾಳ್ ಧನಿಗೂಡಿಸಿದರು.

*****************

**ರಾಜ್ಯದ ಹಲವೆಡೆ ಒಣಹವೆ ಮುಂದುವರಿಯಲಿದೆ. ಕೆಲವು ಜಿಲ್ಲೆಗಳಲ್ಲಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.**

**ಇದೆ 22 ಹಾಗೂ 23 ರಂದು ಬೆಂಗಳೂರಿನಲ್ಲಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ. ಅತಿ ಹೆಚ್ಚು ಉಷ್ಣಾಂಶ ಕಲಬುರಗಿಯಲ್ಲಿ 39.6 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ. ಬೆಂಗಳೂರಿನಲ್ಲಿ 34.7 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ.**

***********ಮುಕ್ತಾಯ***********